# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪   ಫ್ಯಾಕ್ಸ್ : ೨೬೫೨೩೮೬೭
http://www.kasapa.in   e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩-೨೪ ದಿನಾಂಕ : ೦೮-೦೪-೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
.................................................ಬೆಂಗಳೂರು

**ಪ್ರಕಟಣೆಯ ಕೃಪೆಗಾಗಿ**

## ನಂದಿನಿ ಕನ್ನಡಿಗರ ಹೆಮ್ಮೆ:

## ಕೆಎಮ್ಎಫ್ ಉಳಿಸಿಕೊಳ್ಳುವುದು ನಮ್ಮ ಕರ್ತವ್ಯ- ನಾಡೋಜ ಡಾ. ಮಹೇಶ ಜೋಶಿ..

ಬೆಂಗಳೂರು: ಕನ್ನಡ ನಾಡು ನುಡಿಯ ಮೇಲೆ ಪರ ಭಾಷೆಯವರು ಒಂದಿಲ್ಲೊಂದು ರೀತಿಯಲ್ಲಿ ದಬ್ಬಾಳಿಕೆ ನಡೆಸುತ್ತಲೇ ಬಂದಿದ್ದಾರೆ. ಕನ್ನಡಿಗ ರೈತರಿಂದಲೇ ಆರಂಭವಾದ ನಂದಿನಿ ಎನ್ನುವ ನಾಡಿನ ಹೆಮ್ಮೆಯ ಸಂಸ್ಥೆಯ ರಕ್ಷಣೆ ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿ. ಕೆಎಮ್ಎಫ್ ಉಳಿಸಿ ಬೆಳೆಸಲು ಎಲ್ಲ ಕನ್ನಡಿಗರು ಒಂದಾಗಬೇಕು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು ಕರ್ನಾಟಕದಲ್ಲಿ ಅಮುಲ್ ಉತ್ಪನ್ನಗಳ ಮಾರಾಟದ ವಿಚಾರ ರಾಜ್ಯದಲ್ಲಿ ಭಾರೀ ವಿವಾದಕ್ಕೆ ಕಾರಣವಾಗಿದೆ. ಇದರ ಬೆನ್ನಲ್ಲೇ ಅಮುಲ್ ಹಾಗೂ ನಂದಿನಿ ವಿಲೀನದ ಆತಂಕವನ್ನು ಹುಟ್ಟಿಕೊಂಡಿದೆ. ನಮ್ಮ ರೈತರ ಪಾಲಿನ ಸಂಜೀವಿನಿಯಾಗಿರುವ ನಂದಿನಿಯನ್ನು ನುಂಗಿಹಾಕುವ ಸಂಚು ನಡೆಯುತ್ತಿದೆ ಎಂಬ ಮಾತು ರಾಜಕೀಯ ವಲಯದಲ್ಲಿ ಕೇಳಿಬರುತ್ತಿದೆ. ಇದರಿಂದ ಕನ್ನಡಿಗರ ಹೆಮ್ಮೆಯ ಕೆ ಎಮ್ ಎಫ್ ತಲೆಯ ಮೇಲೆ ಅಪಾಯದ ತೂಗುಗತ್ತಿ ತೂಗುತ್ತಿದೆ ಎನ್ನುವ ಸಂಗತಿ ವ್ಯಕ್ತವಾಗುತ್ತಿದೆ. ಇದರಿಂದ ರೈತರನ್ನು, ನಂದಿನಿ ಬಳಕೆದಾರರನ್ನು ಗೊಂದಲಕ್ಕೆ ನೂಕಿದಂತಾಗುತ್ತದೆ ಎಂದು ನಾಡೋಜ ಡಾ. ಮಹೇಶ ಜೋಶಿ ಅಭಿಪ್ರಾಯ ಪಟ್ಟರು.

ಕರ್ನಾಟಕದಲ್ಲಿ ನಮ್ಮ ಕನ್ನಡಿಗರೇ ಕಟ್ಟಿ ಬೆಳೆಸಿ, ನಾಡಿನಲ್ಲಿ ಶ್ವೇತ ಕ್ರಾಂತಿಗೆ ನಾಂದಿ ಹಾಡುವುದರ ಜೊತೆಗೆ ರಾಜ್ಯದ ಇಕ್ಕೆಲಗಳ ರಾಜ್ಯದಲ್ಲಿಯೂ ಹೆಸರು ಮಾಡಿದ ನಂದಿನಿ ಉತ್ಪನ್ನಗಳನ್ನು ಉಳಿಸಿ ಬೆಳೆಸು ಹೊಣೆಗಾರಿಕೆ ಕನ್ನಡಿಗರದ್ದಾಗಿದೆ. ಈಗ ರೈತರ ಪಾಲಿನ ಸಂಜೀವಿನಿಯಾಗಿರುವ ನಂದಿನಿಯನ್ನು ಯಾವುದೋ ಅನ್ಯ ಭಾಷಿಕ ಕಂಪನಿಯೊಂದು ತನ್ನ ತೆಕ್ಕೆಗೆ ತೆಗೆದುಕೊಳ್ಳಲು ಕನ್ನಡಿಗರ ಅಸ್ಮಿತೆಯ ಪ್ರತೀಕವಾಗಿರುವ ಕನ್ನಡ ಸಾಹಿತ್ಯ ಪರಿಷತ್ತು ಸಹಿಸಿಕೊಳ್ಳುವುದಿಲ್ಲ ಎಂದಿದ್ದಾರೆ.

ಕೆಎಂಎಫ್ ಮತ್ತು ಅಮುಲ್ ಸಂಸ್ಥೆಗಳ ವಿಲೀನವನ್ನು ಕನ್ನಡ ಸಾಹಿತ್ಯ ಪರಿಷತ್ತು ವಿರೋಧಿಸುತ್ತದೆ. ಈ ವಿಲೀನದ ಪ್ರಸ್ತಾವಕ್ಕೆ ಕನ್ನಡಿಗರ ತೀವ್ರ ವಿರೋಧದ ಹಿನ್ನೆಲೆಯಲ್ಲಿ ಸಂಬಂಧ ಪಟ್ಟವರೊಂದಿಗೆ ಪರಿಷತ್ತು ಮಾತನಾಡಿ ನಂದಿನಿಯೊಂದಿಗೆ ಕನ್ನಡಿಗರು ಹೊಂದಿದ ಅವಿನಾಭಾವ ಸಂಬಂಧದ ಕುರಿತು ಎಚ್ಚರಿಸಲಿದೆ. ನಮ್ಮ ದಿನದ ಆರಂಭ ನಂದಿನಿ ಹಾಲಿನಿಂದ, ತಾಯಿಯ ಹಾಲಿಗೆ ಸರಿ ಸಾಟಿಯಾಗಿದ್ದ ನಂದಿನಿ ಹಾಲು ಮತ್ತು ಅದರ ಉತ್ಪನ್ನಗಳನ್ನು ನಾವೆಲ್ಲಾ ಸೇರಿ ಉಳಿಸಿಕೊಳ್ಳುವ ಅನಿವಾರ್ಯ ಕಾಲ ಬಂದಿದೆ ಎಂದು ನಾಡೋಜ ಡಾ. ಮಹೇಶ ಜೋಶಿ ಕಳವಳ ವ್ಯಕ್ತಪಡಿಸಿದ್ದಾರೆ.

ಗುಜರಾತ್ ಮೂಲದ ಅಮುಲ್ ಸಂಸ್ಥೆ ತನ್ನ ಉತ್ಪನ್ನಗಳಾದ ಹಾಲು ಮತ್ತು ಮೊಸರು, ತುಪ್ಪ ಇತ್ಯಾದಿ ಉತ್ಪನ್ನಗಳನ್ನು ಮಾರಾಟದ ಮೂಲಕ ಕರ್ನಾಟಕದ ಮಾರುಕಟ್ಟೆ ಪ್ರವೇಶಿಸುತ್ತಿದೆ. ಇದಕ್ಕೆ ಕನ್ನಡಿಗರು ನಮ್ಮ ಅಭಿಮಾನದ ನಂದಿನಿ ಉತ್ಪನ್ನಗಳನ್ನೇ ಖರೀದಿ ಮಾಡುವ ಮೂಲಕ ತಕ್ಕ ಉತ್ತರ ನೀಡಬೇಕಿದೆ. ಕೆಎಮ್ಎಫ್ ನವರು ರೈತರಿಗೆ ಹೆಚ್ಚಿನ ಸೌಲಭ್ಯಗಳನ್ನು ನೀಡುವ ಮೂಲಕ ನಾಡಿನ ರೈತರ ಜೀವನದಲ್ಲಿ ನಿರಂತರ ಸಂತಸ ತರುವ ಅವಶ್ಯಕತೆಯೂ ಸಾಕಷ್ಟಿದೆ ಎನ್ನುವ ಮಾತನ್ನು ನಾಡಿನ ರೈತರು ಆಡಿಕೊಳ್ಳುತ್ತಿದ್ದಾರೆ. ರೈತರ ಹಿತರಕ್ಷಣೆಗಾಗಿ ಕಟ್ಟಿರುವ ಕೆಎಂಎಫ್ ನ ರಕ್ಷಣೆ ನಮ್ಮೆಲ್ಲರ ಹೊಣೆ ಎನ್ನುವುದನ್ನು ಕನ್ನಡ ಸಾಹಿತ್ಯ ಪರಿಷತ್ತು ಕನ್ನಡಿಗರನ್ನು ಎಚ್ಚರಿಸಲಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ತಿಳಿಸಿದರು.

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು
ಬೆಂಗಳೂರು